ಜಿ.ಟಿ.ಸಂಖ್ಯೆ 330/2021
ದಿ: 27/01/2021

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಾರ್ಯಾಲಯ,
(ಆಡಳಿತ ವಿಭಾಗ) ತುಮಕೂರು. ದಿನಾಂಕ: 25/1/2021

**ಪ್ರಥಮ ದರ್ಜೆ ಸಹಾಯಕರ ಹುದ್ದೆಯ – ದಾಖಲೆಗಳ ಪರಿಶೀಲನೆ**

**ವಿಷಯ:** ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಯಾದ ಪ್ರಥಮ ದರ್ಜೆ ಸಹಾಯಕರುಗಳ ಮೂಲ ದಾಖಲೆಗಳ ಪರಿಶೀಲನೆ ನಡೆಸುವ ಕುರಿತು.

**ಉಲ್ಲೇಖ:** 1. ಕರ್ನಾಟಕ ಲೋಕಸೇವಾ ಆಯೋಗದ ಪತ್ರ ಸಂಖ್ಯೆ ಪಿ.ಎಸ್.ಸಿ. ಇ.(2)2237–2265/2020–21/ಪಿ.ಎಸ್.ಸಿ., ದಿನಾಂಕ: 4/12/2020.
2. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಆದೇಶ ದಿನಾಂಕ: 25/1/2021.

ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಯಾಗಿ ತುಮಕೂರು ಜಿಲ್ಲಾ ನ್ಯಾಯಾಂಗ ಘಟಕಕ್ಕೆ ಹಂಚಿಕೆಯಾಗಿರುವ ಪ್ರಥಮ ದರ್ಜೆ ಸಹಾಯಕರುಗಳ ಅಭ್ಯರ್ಥಿಗಳಿಗೆ **ದಿನಾಂಕ: 5/2/2021 ರಂದು** ತುಮಕೂರಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಕಛೇರಿಯಲ್ಲಿ ಮೂಲ ದಾಖಲೆಗಳ ಪರಿಶೀಲನೆಗಾಗಿ ದಿನಾಂಕವನ್ನು ನಿಗದಿಗೊಳಿಸಿದೆ. ಅಭ್ಯರ್ಥಿಗಳು ತಮಗೆ ನಿಗದಿಗೊಳಿಸಿದ ದಿನದಂದು ಪೂರ್ವಾಹ್ನ 10.00 ಗಂಟೆಗೆ ಹಾಜರಿರುವುದು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನಮೂದಿಸಿರುವ ವಿವರಗಳಿಗೆ ಸಂಬಂಧಿಸಿದಂತೆ ಎಲ್ಲಾ ಮೂಲದಾಖಲೆಗಳ ಪ್ರತಿಯೊಂದನ್ನು (Xerox) **ಸ್ವಯಂ ದೃಢೀಕರಿಸಿ** ದಾಖಲೆಗಳ ಪರಿಶೀಲನಾ ದಿನದಂದು ಈ ಕಚೇರಿಗೆ ಸಲ್ಲಿಸತಕ್ಕದ್ದು.

ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳೊಂದಿಗೆ ಹಾಜರಾಗುವುದು:

1. ಅರ್ಜಿಯ ಪ್ರತಿ
2. ಪಾಸ್‌ಪೋರ್ಟ್ ಅಳತೆಯ ಒಂದು ಭಾವಚಿತ್ರ
3. ಎಸ್.ಎಸ್.ಎಲ್.ಸಿ ಮೂಲ ಅಂಕಪಟ್ಟಿ
4. ಪದವಿಯ ಎಲ್ಲಾ ಅಂಕಪಟ್ಟಿಗಳು
5. ಪದವಿ ಘಟಿಕೋತ್ಸವದ ಪ್ರಮಾಣಪತ್ರ
6. ಇತರೆ ಪ್ರಮಾಣಪತ್ರಗಳಿದ್ದಲ್ಲಿ
7. ಜಾತಿ ಪ್ರಮಾಣಪತ್ರದ ಮೂಲಪ್ರತಿ (ಮೀಸಲಾತಿ ಕೋರಿದ್ದಲ್ಲಿ ಮಾತ್ರ)
8. ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರದ ಮೂಲಪ್ರತಿ (ಮೀಸಲಾತಿ ಕೋರಿದ್ದಲ್ಲಿ ಮಾತ್ರ)
9. ಮಾಜಿ ಸೈನಿಕ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ ಮಾತ್ರ)
10. ಅಂಗವಿಕಲ ಪ್ರಮಾಣ ಪತ್ರದ ಮೂಲಪ್ರತಿ (ಮೀಸಲಾತಿ ಕೋರಿದ್ದಲ್ಲಿ ಮಾತ್ರ)
11. ಯೋಜನಾ ನಿರಾಶ್ರಿತ ಪ್ರಮಾಣ ಪತ್ರದ ಮೂಲಪ್ರತಿ (ಮೀಸಲಾತಿ ಕೋರಿದ್ದಲ್ಲಿ ಮಾತ್ರ)
12. ಇತರೆ ಯಾವುದೇ ಮೀಸಲಾತಿ ಕೋರಿದ್ದಲ್ಲಿ, ಅದರ ಪ್ರಮಾಣ ಪತ್ರದ ಮೂಲಪ್ರತಿ.

**ಸೂಚನೆ:**

- ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ದಾಖಲೆಗಳ ಪರಿಶೀಲನೆಗೆ ಹಾಜರಾಗತಕ್ಕದ್ದು.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ನೀಡಿರುವ ಮಾಹಿತಿಗಳಿಗೂ ಹಾಗೂ ದಾಖಲೆಗಳ ಪರಿಶೀಲನೆಗೆ ಹಾಜರಾದ ಸಂದರ್ಭದಲ್ಲಿ ನೀಡುವ ದಾಖಲೆಗಳಿಗೂ ತಾಳೆ ಆಗದ ಸಂದರ್ಭದಲ್ಲಿ ಅಂತಹ ಅಭ್ಯರ್ಥಿಗಳ ಮಾಹಿತಿಯನ್ನು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಮುಂದಿನ ಕ್ರಮಕ್ಕಾಗಿ ತಿಳಿಸಲಾಗುವುದು.
- ಅಭ್ಯರ್ಥಿಗಳು ತಮ್ಮ ಭಾವಚಿತ್ರವಿರುವ ಅಧಿಕೃತ ಗುರುತಿನ ಚೀಟಿಯನ್ನು ತರುವುದು.
- ಅಭ್ಯರ್ಥಿಗಳು ಕೋವಿಡ್-19ರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಸರಿಸತಕ್ಕದ್ದು.

(ಜಿ.ಎಸ್. ಸಂಗ್ರೇಶಿ)

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು

ತುಮಕೂರು

Prl. District & Sessions Judge
TUMKUR.